2012ನೇ ಸಾಲಿನ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳ (ಪಕ್ಷಾಂತರ ನಿಷೇಧ) (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.
(ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿತು)

(ಅನುಬಂಧ–6)

3. ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕ

2012

ಪರ್ಯಾಲೋಚನಾ ಪ್ರಸ್ತಾವ

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಹಾಗೂ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) : ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸ ಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು.

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನೆ ಹಾಗೂ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) : 1964ರನ್ವಯ ಗೋವು, ಪ್ರಾಣಿ ಎನ್ನುವುದರಲ್ಲಿ 2(1)ರ ಕಲಂ ಪ್ರಕಾರ ಪ್ರಾಣಿ

ಎಂದರೆ ಹೋರಿ, ಎತ್ತು, ಎಮ್ಮೆ, ಕೋಣ ಅಥವಾ ಎಮ್ಮೆ ಅಥವಾ ಎಮ್ಮೆ ಕರು ಅದು ಗಂಡಾಗಿರಲಿ, ಹೆಣ್ಣಾಗಿರಲಿ ಎನ್ನುವ ಪದ ಇತ್ತು, ಎಮ್ಮೆ ಮತ್ತು ಕೋಣ ಹೊರತುಪಡಿಸಿ ಗೋಮಾಂಸಕ್ಕೆ ಎತ್ತು ಹೋರಿ ಮತ್ತು ಕರು ಅದು ಗಂಡಿರಲಿ, ಹೆಣ್ಣಿರಲಿ ಎಂದು ಇದೆ.

ಅಧ್ಯಕ್ಷರು : ಪರ್ಯಾಲೋಚನಾ ಪ್ರಸ್ತಾವವನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ
ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಅಧ್ಯಕ್ಷರು : ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.

ಖಂಡ 2 ರಿಂದ 5

ಅಧ್ಯಕ್ಷರು : 2 ರಿಂದ 5 ರವರೆಗಿನ ಖಂಡಗಳು ವಿಧೇಯಕದ ಅಂಗವಾಗಿರಬೇಕು ಎನ್ನುವುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು
ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ

2 ರಿಂದ 5 ರವರೆಗಿನ ಖಂಡಗಳು ವಿಧೇಯಕದ ಅಂಗವಾದವು.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು 2 ರಿಂದ 5 ರವರೆಗಿನ ಖಂಡಗಳು ವಿಧೇಯಕದ ಅಂಗವಾದವು)

ಮೊದಲನೆ ಖಂಡ, ಹೆಸರು ಮತ್ತು ಅವತರಣಿಕೆ

ಮೊದಲನೆಯ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಭಾಗವಾಗಬೇಕೆಂಬುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ
ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು
(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಅಧ್ಯಕ್ಷರು : ಮಾನ್ಯ ಸಚಿವರು ಅಂಗೀಕಾರ ಪ್ರಸ್ತಾವ ಮಂಡಿಸಿ.

ಪ್ರಸ್ತಾವದ ಅಂಗೀಕಾರ

ಶ್ರೀ ರೇವುನಾಯಕ್ ಬೆಳಮಗಿ (ಪಶುಸಂಗೋಪನಾ ಹಾಗೂ ಲೋಕ ಶಿಕ್ಷಣ, ಗ್ರಂಥಾಲಯ, ಸಣ್ಣ ಉಳಿತಾಯ ಮತ್ತು ಲಾಟರಿ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು

ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. ಪ್ರಸ್ತಾವ ಏನೆಂದರೆ,

2012ನೇ ಸಾಲಿನ ಕರ್ನಾಟಕ ಗೋವಧೆ ಪ್ರತಿಬಂಧಕ ಮತ್ತು ಜಾನುವಾರು ಪರಿರಕ್ಷಣೆ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿತು)

4. ಮಣಿಪಾಲ ವಿಶ್ವವಿದ್ಯಾಲಯ ವಿಧೇಯಕ, 2012

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, 2012ನೇ ಸಾಲಿನ ಕರ್ನಾಟಕ ಮಣಿಪಾಲ ವಿಶ್ವವಿದ್ಯಾಲಯ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವವನ್ನು ಮಂಡಿಸಲಾಯಿತು. ವಿವರಣೆ ನೀಡಿ.

ಶ್ರೀ ಸಿ.ಟಿ. ರವಿ (ಉನ್ನತ ಶಿಕ್ಷಣ ಸಚಿವರು) :– ಮಾನ್ಯ ಅಧ್ಯಕ್ಷರೆ, ಉನ್ನತ ಶಿಕ್ಷಣ ಪಡೆಯುತ್ತಿರತಕ್ಕಂಥ ಸಂಖ್ಯೆ ಮತ್ತು ಗುಣಮಟ್ಟವನ್ನು ಗಣನೀಯವಾಗಿ ಹೆಚ್ಚಿಸಬೇಕು ಎನ್ನತಕ್ಕಂಥದ್ದು ರಾಜ್ಯ ಮತ್ತು ಕೇಂದ್ರದ ಅಭಿಪ್ರಾಯ. ಪ್ರಸ್ತುತ ಚಾಲ್ತಿಯಲ್ಲಿರತಕ್ಕಂಥ gross enrolment ratio ಅಂದರೆ 18 ರಿಂದ 23 ವಯೋಮಿತಿಯೊಳಗಿನವರ ಉನ್ನತ ಶಿಕ್ಷಣ